# ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಾಂತರಾಮ್ ಬುಡ್ನಾ ಸಿದ್ದಿ ಇವರು ನಿಯಮ-72 ರಡಿ ರಾಜ್ಯದಲ್ಲಿನ ಅನೇಕ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸಿಬ್ಬಂದಿಗಳ ಕೊರತೆ ಇರುವುದರಿಂದ ಹಳ್ಳಿಗಳಲ್ಲಿ/ಹಾಡಿಗಳಲ್ಲಿರುವ ಜನರಿಗೆ ನಗರ ಪ್ರದೇಶಗಳಿಗೆ ಹೋಗುವುದು ತುಂಬಾ ಕಷ್ಟಕರವಾಗಿರುತ್ತದೆ. ವಿಶೇಷವಾಗಿ ಹಳ್ಳಿಭಾಗದಲ್ಲಿನ ಬುಡಕಟ್ಟು ಮತ್ತು ಇತರೆ ಗ್ರಾಮೀಣ ಭಾಗದ ಜನರಿಗೆ ಯಾವುದೇ ತೊಂದರೆ ಆಗದಂತೆ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಸಿಬ್ಬಂದಿಗಳ ನೇಮಕ ಮಾಡುವಂತೆ ಪ್ರಸ್ತಾಪಿಸಿರುವ ಸೂಚನೆಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಉತ್ತರ:-

**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ವಿವಿಧ ವೃಂದದ ಹುದ್ದೆಗಳನ್ನು ಭರ್ತಿ ಮಾಡಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ:-**

1. ಸರ್ಕಾರದ ಪತ್ರ ಸಂಖ್ಯೆ: ಆಕುಕ 453 ಹೆಚ್‌ಎಸ್‌ಹೆಚ್ 2022, ದಿನಾಂಕ:13.12.2022ರಲ್ಲಿ ರಾಜ್ಯದ ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳನ್ನು ಹೊರತುಪಡಿಸಿ ಇತರೆ ಜಿಲ್ಲೆಗಳಲ್ಲಿನ ಗ್ರಾಮೀಣ ಪ್ರದೇಶಗಳ ಪ್ರಾ.ಆ.ಕೇಂದ್ರ ಮತ್ತು ಸ.ಆ.ಕೇಂದ್ರಗಳಲ್ಲಿ ಖಾಲಿಯಿರುವ ತಜ್ಞ ವೈದ್ಯರು ಮತ್ತು ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಚಾಲ್ತಿಯಲ್ಲಿರುವ ಸರ್ಕಾರದ ಆದೇಶಗಳಡಿ ಗುತ್ತಿಗೆ ಆಧಾರದ ಮೇಲೆ ಜಿಲ್ಲಾಧಿಕಾರಿಗಳ ಹಂತದಲ್ಲಿ ನಿಯಾಮಾನುಸಾರ ಭರ್ತಿ ಮಾಡಲು ಅನುಮತಿ ನೀಡಲಾಗಿದೆ.

2. ಇಲಾಖೆಯಲ್ಲಿ ಖಾಲಿಯಿರುವ 120 ತಜ್ಞ ವೈದ್ಯರು ಮತ್ತು 100 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆಯು ಸಹಮತಿ ನೀಡಿದ್ದು, ಅದರಂತೆ ಕ್ರಮವಹಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.

3.The Karnataka compulsory service by candidates completed Medical courses Act, 2012 ಹಾಗೂ ಕಾಲಕಾಲಕ್ಕೆ ಮಾಡಲಾದ ತಿದ್ದುಪಡಿ ಕಾಯ್ದೆ ಹಾಗೂ ಇದರಡಿ ರಚಿಸಲಾದ ನಿಯಮದಡಿ ಎಂ.ಬಿ.ಬಿ.ಎಸ್., ಪದವಿ ಪೂರೈಸಿ ಬರುವ ವೈದ್ಯರಿಗೆ ಒಂದು ವರ್ಷದ ಕಡ್ಡಾಯ ಸೇವೆಗೆ ನೇಮಿಸಲಾಗುತ್ತಿದೆ.

4. ಆದೇಶ ಸಂಖ್ಯೆ : ಆಕುಕ 619 ಹೆಚ್‌ಎಸ್‌ಹೆಚ್ 2022, ದಿನಾಂಕ : 17/01/2024 ಹಾಗೂ 11/03/2024ರಲ್ಲಿ ಇಲಾಖೆಯಲ್ಲಿ ಖಾಲಿ ಇರುವ 337 ತಜ್ಞ ವೈದ್ಯರು ಮತ್ತು 250 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲು ಕೆಲವೊಂದು ಷರತ್ತುಗಳಿಗೆ ಒಳಪಡಿಸಿ ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲು ಅನುಮತಿ ನೀಡಲಾಗಿದೆ.

5. ಸುತ್ತೋಲೆ ಸಂಖ್ಯೆ : ಆಕುಕ 21 ಹೆಚ್‌ಎಸ್‌ಹೆಚ್ 2025, ದಿನಾಂಕ : 08/01/2025 ಮತ್ತು ಸೇರ್ಪಡೆ ಸಂಖ್ಯೆ : HFW/1/PRS/2025, ದಿನಾಂಕ : 25/01/2025 ಮತ್ತು ಪತ್ರ ದಿನಾಂಕ: 29/01/2025 ರಲ್ಲಿ ಒಟ್ಟಾರೆಯಾಗಿ 250 ಮಿತಿಯಲ್ಲಿ ಅಗತ್ಯಕ್ಕನುಗುಣವಾಗಿ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ/ ತುರ್ತು ಚಿಕಿತ್ಸಾ ವೈದ್ಯಾಧಿಕಾರಿ/ಹಿರಿಯ ವೈದ್ಯಾಧಿಕಾರಿ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅನುಮತಿ ನೀಡಲಾಗಿದೆ.

6. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕಲ್ಯಾಣ ಕರ್ನಾಟಕ ವೃಂದದಲ್ಲಿ ಖಾಲಿ ಇರುವ ವಿವಿಧ ಈ ಕೆಳಕಂಡ ಅರೆ ವೈದ್ಯಕೀಯ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ.

| ಕ್ರ. ಸಂ | ಹುದ್ದೆ | ಅಧಿಸೂಚಿಸಿರುವ ಹುದ್ದೆಗಳ ಸಂಖ್ಯೆ |
|---|---|---|
| 1 | ಕಿರಿಯ ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿ | 54 |
| 2 | ನೇತ್ರಾಧಿಕಾರಿ | 15 |
| 3 | ಫಾರ್ಮಸಿ ಅಧಿಕಾರಿ | 98 |
| 4 | ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ | 126 |
| | ಒಟ್ಟು | **293** |

ಸದರಿ ಹುದ್ದೆಗಳಿಗೆ ದಿನಾಂಕ: 25/07/2025 ರಂದು ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಚುರಪಡಿಸಲಾಗಿದೆ. ಅಂತಿಮ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ಪೊಲೀಸ್ ಪೂರ್ವಾಪರ ವರದಿ, ವಿದ್ಯಾರ್ಹತೆಯ ನೈಜತಾ ವರದಿಗಳು, ಸಿಂಧುತ್ವ ಹಾಗೂ ಇತರೇ ವರದಿಗಳು ಸ್ವೀಕೃತವಾಗುತ್ತಿದ್ದು, ವರದಿಗಳು ಸ್ವೀಕೃತವಾಗಿರುವ ಅರ್ಹ ಅಭ್ಯರ್ಥಿಗಳಿಗೆ ಸಮಾಲೋಚನೆ ಮುಖಾಂತರ ನೇಮಕಾತಿ ಆದೇಶವನ್ನು ನೀಡುವ ಬಗ್ಗೆ ಪರಿಶೀಲನೆಯಲ್ಲಿದೆ.

7. ಅದೇ ರೀತಿ ಉಳಿಕೆ ಮೂಲ ವೃಂದದಲ್ಲಿ ಖಾಲಿ ಇರುವ ಈ ಕೆಳಕಂಡ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ.

| ಕ್ರ. ಸಂ | ಹುದ್ದೆ | ಅಧಿಸೂಚಿಸಿರುವ ಹುದ್ದೆಗಳ ಸಂಖ್ಯೆ |
|---|---|---|
| | ಉಳಿಕೆ ಮೂಲ ವೃಂದ | |
| 1 | ಕಿರಿಯ ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿ | 150 |
| 2 | ಫಾರ್ಮಸಿ ಅಧಿಕಾರಿ | 400 |
| 3 | ಕಿರಿಯ ವೈದ್ಯಕೀಯ ವಿಕಿರಣ ಶಾಸ್ತ್ರ, ಚಿತ್ರಣ ಅಧಿಕಾರಿ | 8 |
| | ಒಟ್ಟು | **558** |

ಮೇಲಿನ ಪಟ್ಟಿಯಲ್ಲಿನ ಕ್ರಮ ಸಂಖ್ಯೆ (1) ಮತ್ತು (2)ರ ವೃಂದದ ಹುದ್ದೆಗಳಿಗೆ ದಿನಾಂಕ:02.08.2025 ರಂದು ಅಂತಿಮ ಆಯ್ಕೆಪಟ್ಟಿಯನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಇಲಾಖಾ ಜಾಲತಾಣದಲ್ಲಿ ಪ್ರಕಟಿಸಲಾಗಿದೆ. ಅಂತಿಮ ಆಯ್ಕೆಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ಪೊಲೀಸ್ ಪೂರ್ವಾಪರ ವರದಿ, ವಿದ್ಯಾರ್ಹತೆಯ ನೈಜತಾ ವರದಿಗಳು, ಸಿಂಧುತ್ವ ಹಾಗೂ ಇತರೇ ವರದಿಗಳು ಸ್ವೀಕೃತವಾಗುತ್ತಿದ್ದು, ವರದಿಗಳು ಸ್ವೀಕೃತವಾಗಿರುವ ಅರ್ಹ ಅಭ್ಯರ್ಥಿಗಳಿಗೆ ಸಮಾಲೋಚನೆ ಮುಖಾಂತರ ನೇಮಕಾತಿ ಆದೇಶವನ್ನು ನೀಡುವ ಬಗ್ಗೆ ಪರಿಶೀಲನೆಯಲ್ಲಿದೆ.

ಮೇಲಿನ ಪಟ್ಟಿಯಲ್ಲಿನ ಕ್ರ.ಸಂ. (03) ರಲ್ಲಿನ ಕಿರಿಯ ವೈದ್ಯಕೀಯ ವಿಕಿರಣಶಾಸ್ತ್ರ, ಚಿತ್ರಣ ಅಧಿಕಾರಿ-08 ಹುದ್ದೆಗಳಿಗೆ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ದಿನಾಂಕ: 02.08.2025 ರಂದು ಅಭ್ಯರ್ಥಿಗಳ ಮಾಹಿತಿಗಾಗಿ ಇಲಾಖಾ ಜಾಲತಾಣದಲ್ಲಿ ಪ್ರಕಟಿಸಿ, ಬಾದಿತ ಅಭ್ಯರ್ಥಿಗಳಿಂದ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ. ನಿಗಧಿತ ದಿನಾಂಕದೊಳಗೆ ಸ್ವೀಕೃತವಾಗುವ ಆಕ್ಷೇಪಣೆಗಳನ್ನು ಪರಿಶೀಲಿಸಿ ಅಂತಿಮ ಆಯ್ಕೆಪಟ್ಟಿಯನ್ನು ಪ್ರಕಟಿಸುವ ಪ್ರಕ್ರಿಯೆಯು ಚಾಲನೆಯಲ್ಲಿರುತ್ತದೆ.

8. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ವಿವಿಧ ವೃಂದದ ಅರೆ ವೈದ್ಯಕೀಯ ಹುದ್ದೆಗಳನ್ನು ಭರ್ತಿ ಮಾಡುವ ಕುರಿತಂತೆ ಸಲ್ಲಿಕೆಯಾಗಿದ್ದ ದಿನಾಂಕ: 01/09/2023ರ ಪ್ರಸ್ತಾವನೆಗೆ ಸಂಬಂಧಿಸಿದಂತೆ ಸರ್ಕಾರದ ಆದೇಶ ಸಂಖ್ಯೆ: ಆಕುಕ 333 ಹೆಚ್‌ಎಸ್‌ಎಂ 2023, ದಿನಾಂಕ: 21.12.2024 ರಲ್ಲಿ 1205 ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಹಾಗೂ 300 ಆರೋಗ್ಯ ನಿರೀಕ್ಷಣಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲು ಅನುಮೋದನೆ ನೀಡಲಾಗಿದ್ದು, ಸದರಿ 02 ವೃಂದಗಳ ಹುದ್ದೆಗಳ ನೇಮಕಾತಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಕರಡು ವಿಶೇಷ ನೇಮಕಾತಿ ನಿಯಮಗಳನ್ನು ರಚಿಸುವ ಪ್ರಕ್ರಿಯೆ ಚಾಲನೆಯಲ್ಲಿರುತ್ತದೆ.

9. ಸರ್ಕಾರದ ಆದೇಶ ಸಂಖ್ಯೆ : ಆಕುಕ 14 ಹೆಚ್‌ಎಸ್‌ಎಂ 2025, ದಿನಾಂಕ: 21/05/2025 ರಲ್ಲಿ ಇಲಾಖೆಯಲ್ಲಿ ಖಾಲಿ ಇರುವ 400 ಕಿರಿಯ ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿ ಹಾಗೂ 400 ಫಾರ್ಮಸಿ ಅಧಿಕಾರಿಗಳನ್ನು ನೇರ ನೇಮಕಾತಿಯಡಿ ಭರ್ತಿ ಮಾಡುವವರೆಗೆ ಗುತ್ತಿಗೆ ಆಧಾರದ ಮೇಲೆ ಒಂದು ವರ್ಷದ ಅವಧಿಗೆ ಭರ್ತಿ ಮಾಡಿಕೊಳ್ಳಲು ಆದೇಶಿಸಲಾಗಿರುತ್ತದೆ.

10. ಸರ್ಕಾರದ ಆದೇಶ ಸಂಖ್ಯೆ: ಆಕುಕ 178 ಹೆಚ್‌ಎಸ್‌ಎಂ 2025, ದಿನಾಂಕ. 30/06/2025 ರಲ್ಲಿ 2025-26 ನೇ ಸಾಲಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿನ ರಾಜ್ಯವಲಯದ ಆಸ್ಪತ್ರೆಗಳಲ್ಲಿ ಖಾಲಿಯಿರುವ ಗ್ರೂಪ್-ಡಿ ಹುದ್ದೆಗಳ ಪೈಕಿ ಶೇಕಡ 80 ರಷ್ಟು (80%) ಹುದ್ದೆಗಳನ್ನು ಮಾತ್ರ ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲು ಕೆಲವೊಂದು ಷರತ್ತುಗಳಿಗೊಳಪಡಿಸಿ ಅನುಮತಿ ನೀಡಲಾಗಿರುತ್ತದೆ.

11. ಸರ್ಕಾರದ ಆದೇಶ ಸಂಖ್ಯೆ: ಆಕುಕ 62 ಎಮ್‌ಎಸ್‌ಎನ್ 2025, ದಿನಾಂಕ: 22-09-2025 ರಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ 600 ಶುಶ್ರೂಷಾಧಿಕಾರಿ ಹುದ್ದೆಗಳನ್ನು ಕೆಲವೊಂದು ಷರತ್ತಿಗೊಳಪಟ್ಟು ಗುತ್ತಿಗೆ ಆಧಾರದ ಮೇಲೆ ಪಡೆಯಲು ಅನುಮತಿ ನೀಡಲಾಗಿದೆ.

ಮೇಲ್ಕಂಡ ಎಲ್ಲಾ ರೀತಿಯ ಕ್ರಮಗಳೊಂದಿಗೆ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳಲಾಗುತ್ತಿದೆ.

ಸಂಖ್ಯೆ: ಆಕುಕ 75 ಹೆಚ್‌ಪಿಸಿ 2025

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು